ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1801
ಸದಸ್ಯರ ಹೆಸರು		ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು)
ಉತ್ತರಿಸುವವರು	:	ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.
ಉತ್ತರಿಸಬೇಕಾದ ದಿನಾಂಕ	:	15-03-2022

ಕ್ರ ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದಿಂದ ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸಲು ಮತ್ತು ಅವುಗಳನ್ನು ನಡೆಸಲು ಪ್ರತಿ ವರ್ಷ ಅನುದಾನವನ್ನು ಸರಿಯಾದ ರೀತಿಯಲ್ಲಿ ಬಳಸುತ್ತಿಲ್ಲವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದಿಂದ ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸಲು ಮತ್ತು ಅವುಗಳನ್ನು ನಡೆಸಲು ಪ್ರತಿ ವರ್ಷ ಒದಗಿಸಲಾಗುವ ಅನುದಾನವನ್ನು ಸರಿಯಾದ ರೀತಿಯಲ್ಲಿ ಬಳಸಲಾಗುತ್ತಿದೆ.
ಆ)	ರಾಜ್ಯ ಸರ್ಕಾರಕ್ಕೆ ಕೇಂದ್ರ ಸರ್ಕಾರದಿಂದ ಕಳೆದ 05 ವರ್ಷಗಳಲ್ಲಿ ಅಂಗನವಾಡಿ ಯೋಜನೆಯಡಿ ಬಿಡುಗಡೆಯಾದ ಮತ್ತು ಅದಕ್ಕೆ ಎದುರಾಗಿ ಬಳಕೆ ಮಾಡಲಾದ ಅನುದಾನವೆಷ್ಟು; (ಪೂರ್ಣ ವಿವರವನ್ನು ನೀಡುವುದು)	ರಾಜ್ಯ ಸರ್ಕಾರಕ್ಕೆ ಕೇಂದ್ರ ಸರ್ಕಾರದಿಂದ ಕಳೆದ 05 ವರ್ಷಗಳಲ್ಲಿ ಅಂಗನವಾಡಿ ಯೋಜನೆಯಡಿ ಬಿಡುಗಡೆಯಾದ ಮತ್ತು ಅದಕ್ಕೆ ಎದುರಾಗಿ ಬಳಕೆ ಮಾಡಲಾದ ಅನುದಾನದ ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ.
ಇ)	ರಾಜ್ಯದಲ್ಲಿ ಅಗತ್ಯವಿರುವ ಅಂಗನವಾಡಿ ಕೇಂದ್ರಗಳ ಬಗ್ಗೆ ಸಮೀಕ್ಷೆಯನ್ನು ನಡೆಸಿದೆಯೇ; ಹಾಗಿದ್ದಲ್ಲಿ, ಈ ಹೊಸ ಅಂಗನವಾಡಿ ಕೇಂದ್ರಗಳನ್ನು ಸ್ಥಾಪಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆಯೇ; (ಪೂರ್ಣ ವಿವರವನ್ನು ನೀಡುವುದು)	ಹೌದು, ರಾಜ್ಯದಲ್ಲಿ ಅಗತ್ಯವಿರುವ ಅಂಗನವಾಡಿ ಕೇಂದ್ರಗಳ ಬಗ್ಗೆ ಸಮೀಕ್ಷೆಯನ್ನು ನಡೆಸಲಾಗಿದೆ. 4244 ಹೊಸ ಅಂಗನವಾಡಿ ಕೇಂದ್ರಗಳನ್ನು ಸ್ಥಾಪಿಸಲು ಕೇಂದ್ರ ಸರ್ಕಾರಕ್ಕೆ ದಿನಾಂಕ:05.08.2020 ರಂದು ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ..

ಈ)	ರಾಜ್ಯ ಸರ್ಕಾರವು ರಾಷ್ಟ್ರೀಯ ಶಿಕ್ಷಣ ನೀತಿ 2020ನ್ನು ಜಾರಿಗೊಳಿಸುತ್ತಿದ್ದು, ಈ ಹೊಸ ನೀತಿಯಂತೆ ರಾಜ್ಯದಲ್ಲಿರುವ ಎಲ್ಲ ಅಂಗನವಾಡಿ ಕೇಂದ್ರಗಳನ್ನು ಆಯಾ ಕೇಂದ್ರ ಸ್ಥಾನದಲ್ಲಿರುವ ಶಾಲೆಗಳೊಂದಿಗೆ ವಿಲೀನಗೊಳಿಸಲು ಯೋಜನೆಯನ್ನು ಸಿದ್ಧಪಡಿಸಿದೆಯೇ; ಹಾಗಿದ್ದಲ್ಲಿ, ಸದರಿ ಯೋಜನೆಯ ರೂಪುರೇಷೆಗಳೇನು? (ಅನುಷ್ಠಾನ ಹಂತದ ಕುರಿತು ವಿವರಗಳನ್ನು ನೀಡುವುದು)	ರಾಜ್ಯ ಸರ್ಕಾರವು ರಾಷ್ಟ್ರೀಯ ಶಿಕ್ಷಣ ನೀತಿ 2020ನ್ನು ಜಾರಿಗೊಳಿಸುತ್ತಿದ್ದು, ಈ ಹೊಸ ನೀತಿಯಂತೆ ರಾಜ್ಯದಲ್ಲಿರುವ ಎಲ್ಲಾ ಅಂಗನವಾಡಿ ಕೇಂದ್ರಗಳನ್ನು ಆಯಾ ಕೇಂದ್ರ ಸ್ಥಾನದಲ್ಲಿರುವ ಶಾಲೆಗಳೊಂದಿಗೆ ವಿಲೀನಗೊಳಿಸಲು ಯೋಜನೆಯನ್ನು ಸಿದ್ಧಪಡಿಸಿರುವುದಿಲ್ಲ. ಪ್ರಸ್ತುತ ರಾಷ್ಟ್ರೀಯ ಶಿಕ್ಷಣ ನೀತಿ 2020 ನ್ನು ಆಯಾ ಅಂಗನವಾಡಿ ಕೇಂದ್ರಗಳಲ್ಲಿ ಅನುಷ್ಠಾನಗೊಳಿಸಲು ರೂಪುರೇಷೆಗಳನ್ನು ಸಿದ್ಧಪಡಿಸಲಾಗುತ್ತಿದೆ.

ಸಂ: ಮಮಇ 110 ಐಸಿಡಿ 2022

(ಆಚಾರ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ
ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಅನುಬಂಧ

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಕಳೆದ 5 ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಹಾಗೂ ಬಳಕೆಯಾದ ಅನುದಾನದ ವಿವರ(ರೂ. ಲಕ್ಷಗಳಲ್ಲಿ)

ಕ್ರ.ಸಂ.	ಕಾರ್ಯಕ್ರಮದ ಹೆಸರು ಮತ್ತು ಲೆಕ್ಕ ಶೀರ್ಷಿಕೆ	2016-17		2017-18		2018-19		2019-20		2020-21	
		ಬಿಡುಗಡೆಯಾದ ಅನುದಾನ	ಬಳಕೆಯಾದ ಅನುದಾನ	ಬಿಡುಗಡೆಯಾದ ಅನುದಾನ	ಬಳಕೆಯಾದ ಅನುದಾನ	ಬಿಡುಗಡೆಯಾದ ಅನುದಾನ	ಬಳಕೆಯಾದ ಅನುದಾನ	ಬಿಡುಗಡೆಯಾದ ಅನುದಾನ	ಬಳಕೆಯಾದ ಅನುದಾನ	ಬಿಡುಗಡೆಯಾದ ಅನುದಾನ	ಬಳಕೆಯಾದ ಅನುದಾನ
1	ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರಿಗೆ ತರಬೇತಿ (CSS)(60:40) 2235-02-102-0-05-015	123.52	173.29	0.00	0.00	397.34	397.34	0.00	0.00	0.00	0.00
2	ಉದ್ಯೋಗಿ ಮಾತೆಯರ ಮಕ್ಕಳಿಗಾಗಿ ಶಿಶುವಿಹಾರಗಳು (CSS:SS-60:40) 2235-02-102-0-13	0.00	0.00	342.00	280.99	480.71	0.00	828.09	577.80	0.00	0.00
3	ಪೋಷಣ ಅಭಿಯಾನ (ರಾಷ್ಟ್ರೀಯ ಪೌಷ್ಟಿಕಾಂಶ ಅಭಿಯಾನ) 2235-02-102-0-43	0.00	0.00	0.00	0.00	5254.55	5254.55	7967.99	3945.41	4021.97	3492.77
4	ಪ್ರಾಯಪೂರ್ವ ಬಾಲಕಿಯರ ಸಬಲೀಕರಣ ರಾಜೀವ್ ಗಾಂಧಿ ಯೋಜನೆ (ಸಬಲ) ಪೌಷ್ಟಿಕಾಂಶ (CSS: SS - 50:50) & ಪೌಷ್ಟಿಕೇತರಾಂಶ (CSS: SS - 60:40) 2235-02-103-0-46	74.20	74.20	87.50	65.84	26.62	7.60	305.59	37.63	20.31	7.78
5	ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆ (CSS: SS - 60:40) 2235-02-103-0-61-059	176.95	83.23	4750.54	4750.54	7228.17	7228.17	9996.29	9996.29	3791.95	3791.95
6	ಅಂಗನವಾಡಿ ಕಟ್ಟಡಗಳ ಉನ್ನತೀಕರಣ 4235-02-102-1-03-125	0.00	0.00	0.00	0.00	0.00	0.00	1255.74	0.00	0.00	0.00

ಅನುಬಂಧ

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಕಳೆದ 5 ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಹಾಗೂ ಬಳಕೆಯಾದ ಅನುದಾನದ ವಿವರ(ರೂ. ಲಕ್ಷಗಳಲ್ಲಿ)

ಕ್ರ.ಸಂ.	ಕಾರ್ಯಕ್ರಮದ ಹೆಸರು ಮತ್ತು ಲೆಕ್ಕ ಶೀರ್ಷಿಕೆ	2016-17		2017-18		2018-19		2019-20		2020-21	
		ಬಿಡುಗಡೆಯಾದ ಅನುದಾನ	ಬಳಕೆಯಾದ ಅನುದಾನ	ಬಿಡುಗಡೆಯಾದ ಅನುದಾನ	ಬಳಕೆಯಾದ ಅನುದಾನ	ಬಿಡುಗಡೆಯಾದ ಅನುದಾನ	ಬಳಕೆಯಾದ ಅನುದಾನ	ಬಿಡುಗಡೆಯಾದ ಅನುದಾನ	ಬಳಕೆಯಾದ ಅನುದಾನ	ಬಿಡುಗಡೆಯಾದ ಅನುದಾನ	ಬಳಕೆಯಾದ ಅನುದಾನ
7	ಸಮಗ್ರ ಶಿಶು ಅಭಿವೃದ್ಧಿ ಯೋಜನೆ (ಜಿಲ್ಲಾ ಘಟಕ) (CSS:SS – 60:40) 2211-00-102-0-02	16235.33	53491.18	32177.98	66858.11	30305.43	67945.89	33189.57	40423.75	27062.74	27062.74
8	ಸಮಗ್ರ ಶಿಶು ಅಭಿವೃದ್ಧಿ ಯೋಜನೆ (204 ಶಿಶು ಅಭಿವೃದ್ಧಿ ಯೋಜನೆಯ ಆಡಳಿತ ವೆಚ್ಚ) (2211-00-102-0-22 (TP) CSS:SS - 60:40)										
9	ಸಮಗ್ರ ಶಿಶು ಅಭಿವೃದ್ಧಿ ಯೋಜನೆ (H.O. Cell) 2235-02-102-0-04 (ಸದರಿ ಲೆಕ್ಕ ಶೀರ್ಷಿಕೆಯಡಿ 2019-20 ನೇ ಸಾಲಿನಿಂದ ಸಂಪೂರ್ಣ ವೆಚ್ಚವನ್ನು ರಾಜ್ಯ ಸರ್ಕಾರದ ವತಿಯಿಂದಲೇ ಭರಿಸಲಾಗುತ್ತಿದೆ.)										
10	ಶಾಲಾ ಪೂರ್ವ ಮಕ್ಕಳ ಊಟದ ಯೋಜನೆ 2235-00-101-0-61 (TP) (CSS: SS - 50:50)	16633.39	60893.59	52105.85	54211.98	40336.87	78243.84	42657.55	37465.92	41000.00	41000.00

ಷರಾ: ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ ವಿವಿಧ ಕಾರ್ಯಕ್ರಮಗಳಡಿ ಫಲಾನುಭವಿಗಳ ಹಿತದೃಷ್ಟಿಯಿಂದ ಹಾಗೂ ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಗೌರವಧನ & ಅಧಿಕಾರಿ/ಸಿಬ್ಬಂದಿಗಳ ವೇತನವನ್ನು ಪಾವತಿಸುವ ದೃಷ್ಟಿಯಿಂದ ರಾಜ್ಯ ಸರ್ಕಾರವು ಕೇಂದ್ರದ ಅನುದಾನ ಬಿಡುಗಡೆಯನ್ನು ನಿರೀಕ್ಷಿಸಿ ಮುಂಚಿತವಾಗಿಯೇ ರಾಜ್ಯ ಸರ್ಕಾರದಿಂದಲೇ ಕೇಂದ್ರದ ಪಾಲಿನ ಅನುದಾನ ಬಿಡುಗಡೆ ಮಾಡಿರುವುದರಿಂದ, ಕೇಂದ್ರ ಸರ್ಕಾರದಿಂದ ಬಿಡುಗಡೆಗೊಳಿಸಿರುವ ಅನುದಾನಕ್ಕಿಂತ ವೆಚ್ಚವು ಅಧಿಕವಾಗಿರುತ್ತದೆ.